1 ನೇ **ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು** 401-2025

**ಸಿ.ಡಬ್ಲ್ಯು -17, ಪಿ.ಡಬ್ಲ್ಯು-6**

**ಸಾಕ್ಷಿದಾರರ ಹೆಸರು** : ಮಹಾಬಲೇಶ್ವರ ಎಸ್.ಎನ್
ಗಂಡನ **ಹೆಸರು** : ಸಣ್ಣಾನಾಯ್ಕ
**ವಯಸ್ಸು** : 60 ವರ್ಷ
**ಉದ್ಯೋಗ** : ನಿವೃತ್ತ ಪೊಲೀಸ್ ನಿರೀಕ್ಷಕರು, ಸಾಗರ ಗ್ರಾಮಾಂತರ ಪೊಲೀಸ್ ಠಾಣೆ,
**ವಾಸ** : ಶಿರಸಿ

**ಪ್ರಮಾಣೀಕರಿಸಿದ ದಿನಾಂಕ :20.07.2026.**

**ಮುಖ್ಯ ವಿಚಾರಣೆ :** ಸ.ಸ.ಅ. ರವರಿಂದ

1. ನಾನು ದಿ:31.08.2023 ರಿಂದ ದಿ:31.05.2026 ವರೆಗೆ ಸಾಗರದ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಆರಕ್ಷಕ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿ:12.11.2024 ರಂದು ರಾತ್ರಿ 9.15 ರ ಸಮಯದಲ್ಲಿ ಚಾಸ 1 ರವರು ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಗುನ್ನ ಸಂಖ್ಯೆ 165/2024 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

3. ದಿ:13.11.2024 ರಂದು ಮೃತನ ಶವ ತನಿಖಾ ಪಂಚನಾಮೆಯನ್ನು ಚಾಸ 7 ಮತ್ತು 8 ರವರ ಸಮಕ್ಷಮ ಸಾಗರದ ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಬೆಳಿಗ್ಗೆ 10 ರಿಂದ 11 ಗಂಟೆಯವರೆಗೆ ಜರುಗಿಸಿರುತ್ತೇನೆ. ಪಂಚನಾಮೆಯ ಕಾಲಕ್ಕೆ ಫೋಟೋ ತೆಗೆದಿರುತ್ತೇನೆ. ಶವದ ಮರಣೋತ್ತರ ಪರೀಕ್ಷೆ ಆದ ನಂತರ ಶವವನ್ನು ವಾರಸುದಾರರಿಗೆ ಒಪ್ಪಿಸಿರುತ್ತೇನೆ. ಅದೇ ದಿನ ಚಾಸ 9 ಮತ್ತು 10 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಚಾಸ 1 ರವರು ತೋರಿಸಿದ ಘಟನಾ ಸ್ಥಳದಲ್ಲಿ ಚಾಸ 4 ಮತ್ತು 5 ರವರ ಸಮಕ್ಷಮ ಪಂಚನಾಮೆಯ ಕ್ರಮವನ್ನು ಜರುಗಿಸಿರುತ್ತೇನೆ. ಪಂಚರಿಗೆ ನೋಟೀಸನ್ನು ಸಹ ಜಾರಿ ಮಾಡಿರುತ್ತೇನೆ. ಪಂಚನಾಮೆಯ ಕಾಲಕ್ಕೆ ಫೋಟೋ ತೆಗೆದಿರುತ್ತೇನೆ ಮತ್ತು ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ. ಪಂಚನಾಮೆಯನ್ನು ಮಧ್ಯಾಹ್ನ 2 ಗಂಟೆಯಿಂದ 3 ಗಂಟೆಯರವರೆಗೆ ಜರುಗಿಸಿರುತ್ತೇನೆ. ಅದೇ ದಿನ ಅಪಘಾತಪಡಿಸಿದ ವಾಹನ ಸಂಖ್ಯೆ ಕೆ ಎ 18 ಬಿ 7126 ನೇದ್ದರ ಮಾರುತಿ ಸುಜುಕಿ ಇಕೋ ಕಾರು ವಾಹನವನ್ನು ಮತ್ತು ಅಪಘಾತಕ್ಕೊಳಪಟ್ಟ ವಾಹನ ಸಂಖ್ಯೆ ಕೆ ಎ 15 ಜೆ 1951 ನೇದ್ದರ ಕವಾಸ್ಕಿ ಬಾಕ್ಸರ್ ದ್ವಿ ಚಕ್ರ ವಾಹವನ್ನು ಠಾಣಾ ಆವರಣಕ್ಕೆ ತಂದು ಚಾಸ 4 ಮತ್ತು 5 ರವರಿಗೆ ನೋಟೀಸನ್ನು ನೀಡಿ ಮಧ್ಯಾಹ್ನ 3.15 ರಿಂದ 4.15 ಗಂಟೆಯವರಿಗೆ ಚಾಸ 4 ಮತ್ತು 5 ರವರ ಸಮಕ್ಷಮ ವಾಹನ

ಅಮಾನತ್ತು ಪಂಚನಾಮೆಯ ಕ್ರಮವನ್ನು ಜರುಗಿಸಿರುತ್ತೇನೆ. ಪಂಚನಾಮೆಯ ಕಾಲಕ್ಕೆ ಪೋಟೋ ತೆಗೆದಿರುತ್ತೇನೆ. ಅದೇ ದಿನ ಚಾಸ 2 ಮತ್ತು 3 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಅಪಘಾತಪಡಿಸಿದ ಮತ್ತು ಅಪಘಾತಕ್ಕೊಳಪಟ್ಟ ವಾಹನಗಳ ಐ ಎಂ ವಿ ತಪಾಸಣೆಯನ್ನು ಮಾಡಬೇಕೆಂದು ಕೋರಿ ಪ್ರಾದೇಶಿಕ ಸಾರಿಗೆ ಇಲಾಖೆಯವರಿಗೆ ನಿವೇದಿಸಿಕೊಂಡಿರುತ್ತೇನೆ.

4. ದಿ:15.11.2024 ರಂದು ಅಪಘಾತಪಡಿಸಿದ ವಾಹನದ ಮಾಲೀಕರಾದ ಚಾಸ 12 ರವರಿಗೆ ನೋಟೀಸನ್ನು ಜಾರಿ ಮಾಡಿ ಅವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಅಪಘಾತಪಡಿಸಿದ ವಾಹನವನ್ನು ಸೂಕ್ತ ಬಾಂಡ್ ಅನ್ನು ಪಡೆದು ಅದರ ಮಾಲೀಕರಿಗೆ ನೀಡಿರುತ್ತೇನೆ. ಅದೇ ದಿನ ಆರೋಪಿಯ ದಸ್ತಗಿರಿ ಕ್ರಮವನ್ನು ಅನುಸರಿಸಿ ಠಾಣಾ ಜಾಮೀನಿನ ಮೇಲೆ ಬಿಟ್ಟಿರುತ್ತೇನೆ.

5. ದಿ:18.11.2024 ರಂದು ಪ್ರಾದೇಶಿಕ ಸಾರಿಗೆ ಇಲಾಖೆಯವರು ನೀಡಿದ ವರದಿಗಳನ್ನು ಸ್ವೀಕರಿಸಿ ಅದನ್ನು ಪ್ರಕರಣದ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

6. ದಿ:17.02.2025 ರಂದು ಮೃತ ರಾಮಚಂದ್ರ ರವರ ಮರಣೋತ್ತರ ಪರೀಕ್ಷಾ ವರದಿಯನ್ನು ಸ್ವೀಕರಿಸಿ ಅದನ್ನು ಪ್ರಕರಣದ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ಅಪಘಾತಕ್ಕೀಡಾದ ವಾಹನಕ್ಕೆ ವಿಮೆ ಮತ್ತು ವಾಹನ ಚಲಾಯಿತಿಸುತ್ತಿದ್ದ ಚಾಲಕನಿಗೆ ವಾಹನ ಚಾಲನಾ ಪರವಾನಗಿ ಇಲ್ಲದ ಕಾರಣ ವಾಹನವನ್ನು ಜಪ್ತುಪಡಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಪಿ.ಎಫ್. ಅನ್ನು ನಿವೇದಿಸಿಕೊಂಡಿರುತ್ತೇನೆ.

7. ದಿ:18.02.2025 ರಂದು ಪ್ರಕರಣದ ತನಿಖೆಯು ಪೂರ್ಣಗೊಂಡಿದ್ದು, ಸೂಕ್ತ ಸಾಕ್ಷಾಧಾರ ದೊರೆತಿದ್ದರಿಂದ ಆರೋಪಿಯ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

8. ಸಾಕ್ಷಿಯು ನಿಪಿ 1 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ 2 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ 3 ರಿಂದ 6 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಯು ನಿಪಿ 7 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 7(ಡಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಪ್ರಥಮ ವರ್ತಮಾನ ವರದಿಯನ್ನು ನಿಪಿ 10 ಎಂದು, ಸಾಕ್ಷಿಯ ಸಹಿಯನ್ನು ನಿಪಿ 10(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಶವ ಪಂಚನಾಮೆಯನ್ನು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಶವ ಪಂಚನಾಮೆಯನ್ನು ನಿಪಿ 11 ಎಂದು, ಸಾಕ್ಷಿಯ ಸಹಿಯನ್ನು ನಿಪಿ 11(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಶವ ಪಂಚನಾಮೆಯ 4 ಛಾಯಾಚಿತ್ರಗಳನ್ನು ನೋಡಿ ಗುರುತಿಸಿದ್ದು, 4 ಛಾಯಾಚಿತ್ರಗಳನ್ನು ನಿಪಿ 12 ರಿಂದ 15 ಎಂದು ಗುರುತಿಸಲಾಯಿತು. ಸಾಕ್ಷಿಯು ಶವ ಪರೀಕ್ಷಾ ವರದಿಯನ್ನು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಶವ ಪರೀಕ್ಷಾ ವರದಿಯನ್ನು ನಿಪಿ 16 ಎಂದು, ಸಾಕ್ಷಿಯ ಸಹಿಯನ್ನು ನಿಪಿ 16(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಪಂಚರಿಗೆ ನೀಡಿದ ನೋಟೀಸ್ ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಪಂಚರಿಗೆ ನೀಡಿದ ನೋಟೀಸನ್ನು ನಿಪಿ 17 ಎಂದು, ಸಾಕ್ಷಿಯ ಸಹಿಯನ್ನು ನಿಪಿ 17(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ವತ್ತಿನ ಪಟ್ಟಿಯನ್ನು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸ್ವತ್ತಿನ ಪಟ್ಟಿಯನ್ನು ನಿಪಿ 18 ಎಂದು, ಸಾಕ್ಷಿಯ ಸಹಿಯನ್ನು ನಿಪಿ 18(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಅಪಘಾತಪಡಿಸಿದ ವಾಹನ ಮಾಲೀಕರಿಗೆ ನೀಡಿರುವ ನೋಟೀಸ್ ಮತ್ತು ಸದರಿ ನೋಟೀಸ್ ಗೆ ವಾಹನದ ಮಾಲೀಕರು ನೀಡಿರುವ ಉತ್ತರದ ಪ್ರತಿಯನ್ನು ಮತ್ತು ಅವುಗಳ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ನೋಟೀಸನ್ನು ಮತ್ತು ಉತ್ತರದ ಪ್ರತಿಯನ್ನು ನಿಪಿ 19 ಮತ್ತು 20 ಎಂದು, ಸಾಕ್ಷಿಯ ಸಹಿಯನ್ನು ನಿಪಿ 19(ಎ) ಮತ್ತು 20(ಎ) ಎಂದು ಗುರುತಿಸಲಾಯಿತು.ನ ಸಾಕ್ಷಿಯು ಐ ಎಂ ವಿ ತಪಾಸಣಾ ವರದಿಯನ್ನು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಐ ಎಂ ವಿ ತಪಾಸಣಾ ವರದಿಯನ್ನು ನಿಪಿ 21 ಎಂದು, ಸಾಕ್ಷಿಯ ಸಹಿಯನ್ನು ನಿಪಿ 21(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಇಂಡಿಮಿನಿಟಿ ಬಾಂಡ್ ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಇಂಡಿಮಿನಿಟಿ ಬಾಂಡ್ ಅನ್ನು ನಿಪಿ 22 ಎಂದು, ಸಾಕ್ಷಿಯ ಸಹಿಯನ್ನು ನಿಪಿ 22(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಛಾಯಾಚಿತ್ರಗಳನ್ನೊಳಗೊಂಡ ಸಿ.ಡಿ.ಯನ್ನು ನೋಡಿ ಗುರುತಿಸಿದ್ದು, ಸಿ.ಡಿ.ಯನ್ನು ನಿಪಿ 23 ಎಂದು ಗುರುತಿಸಲಾಯಿತು.

ಸಾಕ್ಷಿಯು 65 ಬಿ ಪ್ರಮಾಣ ಪತ್ರವನ್ನು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, 65 ಬಿ ಪ್ರಮಾಣ ಪತ್ರವನ್ನು ನಿಪಿ 24 ಎಂದು, ಸಾಕ್ಷಿಯ ಸಹಿಯನ್ನು ನಿಪಿ 24(ಎ) ಎಂದು ಗುರುತಿಸಲಾಯಿತು. ಆ ದಿನ ನಾನು ದಸ್ತಗಿರಿ ಕ್ರಮವನ್ನು ಅನುಸರಿಸಿದ ಆರೋಪಿ ಈ ದಿನ ನ್ಯಾಯಾಲಯದ ಮುಂದೆ ಆರೋಪಿ ಸ್ಥಾನದಲ್ಲಿರುತ್ತಾರೆ.

<u>ಪಾಟೀ ಸವಾಲುಃ- ಆರೋಪಿ ಪರ ಶ್ರೀ ಕೆ.ಎಂ. ವಕೀಲರಿಂದ</u>

1. ಆರೋಪಿಯ ಯಾವುದೇ ತಪ್ಪು ಇಲ್ಲದೇ ಇದ್ದರೂ ಸುಳ್ಳು ಪ್ರಕರಣವನ್ನು ದಾಖಲಿಸಲಾಗಿದೆ ಎಂದರೆ ಸರಿಯಲ್ಲ. ನಾನು ಯಾವುದೇ ಪಂಚನಾಮೆಯ ಕ್ರಮಗಳನ್ನು ಜರುಗಿಸಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಮತ್ತು ಮರುಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ವಾಹನಗಳ ಅಮಾನತ್ತು ಪಂಚನಾಮೆಯನ್ನು ಜರುಗಿಸಿಲ್ಲ ಎಂದರೆ ಸರಿಯಲ್ಲ. ನಾನು ಸರಿಯಾದ ನಿಟ್ಟಿನಲ್ಲಿ ತನಿಖೆಯನ್ನು ನಡಸದೇ ಆರೋಪಿಯ ವಿರುದ್ಧ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**
**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.